# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1228

ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 21.08.2025

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ಪೋಕ್ಸೊ (ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯ್ದೆ) ಪ್ರಕರಣ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿರುವುದು ನಿಜವೇ; | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪೋಕ್ಸೋ ಕಾಯ್ದೆ ಅಡಿಯಲ್ಲಿ ವರದಿಯಾಗಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ :-<br><table><tr><td>ವರ್ಷ</td><td>ದಾಖಲಿಸಿರುವ ಪೋಕ್ಸೋ ಕಾಯ್ದೆ ಪ್ರಕರಣಗಳ ಸಂಖ್ಯೆ</td></tr><tr><td>2023</td><td>3902</td></tr><tr><td>2024</td><td>4064</td></tr><tr><td>2025 (ಜುಲೈ)</td><td>2544</td></tr></table> |
| ಆ) | 2024ನೇ ಸಾಲಿನಲ್ಲಿ ಒಟ್ಟು 3204 ಪ್ರಕರಣಗಳು ದಾಖಲಾಗಿರುವುದು ಮತ್ತು ರಾಜ್ಯದಲ್ಲಿ ಪ್ರತಿನಿತ್ಯ 7 ರಿಂದ 8 ಪ್ರಕರಣಗಳು ದಾಖಲಾಗುತ್ತಿದ್ದು, ತಿಂಗಳಿಗೆ 250 ರಿಂದ 260 ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾಗುತ್ತಿರುವುದು ನಿಜವೇ; | ರಾಜ್ಯದಲ್ಲಿ 2024ನೇ ಸಾಲಿನಲ್ಲಿ ಪೋಕ್ಸೋ ಕಾಯ್ದೆ ಅಡಿಯಲ್ಲಿ 4064 ಪ್ರಕರಣಗಳು ವರದಿಯಾಗಿರುತ್ತದೆ.<br><br>ರಾಜ್ಯದಲ್ಲಿ ಪೋಕ್ಸೋ ಕಾಯ್ದೆ ಅಡಿಯಲ್ಲಿ ಪ್ರತಿನಿತ್ಯ ಸರಾಸರಿ 11 ರಿಂದ 12 ಪ್ರಕರಣಗಳು ಹಾಗೂ ಪ್ರತಿ ತಿಂಗಳು ಸರಾಸರಿ 325 ರಿಂದ 338 ಪ್ರಕರಣಗಳು ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗುತ್ತಿದೆ. |

| | | |
|---|---|---|
| ಇ) | ಇದ್ದಲ್ಲಿ ಸರ್ಕಾರದ ವತಿಯಿಂದ ಹಲವಾರು ಶಿಸ್ತು ಕ್ರಮ ಕೈಗೊಂಡರೂ ಸಹ ಈ ಪ್ರಕರಣಗಳಲ್ಲಿ ಇಳಿಕೆ ಕಾಣದಿರಲು ಕಾರಣವೇನು; | **ಪೋಕ್ಸೋ ಪ್ರಕರಣಗಳು ಇಳಿಕೆಯಾಗದಿರಲು ಈ ಕೆಳಕಂಡ ಅಂಶಗಳು ಪ್ರಮುಖ ಕಾರಣಗಳಾಗಿರುತ್ತದೆ:-**<br><br>1. ಕುಟುಂಬದ ಒಳಗಿನ ಅಪರಾಧಗಳು<br>2. ಡಿಜಿಟಲ್ ಮಾಧ್ಯಮದ ದುರುಪಯೋಗ<br>3. ಅಪರಾಧಿಗಳ ಪುನರಾವರ್ತನೆ<br>4. ಪೋಷಕರ ನಿರ್ಲಕ್ಷ್ಯ<br>5. ಮಕ್ಕಳ ದುರ್ಬಲ ಸ್ಥಿತಿ<br>6. ಸಾಮಾಜಿಕ ಮಾಧ್ಯಮದಲ್ಲಿ ಪ್ರಲೋಭನೆ<br>7. ಮದ್ಯಪಾನ ಮತ್ತು ಮಾದಕದ್ರವ್ಯ ಬಳಕೆ<br>8. ಗೃಹ ಹಿಂಸೆ ಮತ್ತು ದೌರ್ಜನ್ಯ, ನಗರೀಕರಣ ಮತ್ತು ವಲಸೆ . |
| ಈ) | ಇತ್ತೀಚೆಗೆ ದಾಖಲಾಗುತ್ತಿರುವ ಬಹುತೇಕ ಪ್ರಕರಣಗಳ ಪೈಕಿ ಪ್ರೀತಿ-ಪ್ರೇಮ, ಮದುವೆಯಾಗುವುದಾಗಿ ನಂಬಿಸಿರುವ ಯುವಕನೇ ಬಾಲಕಿ ಮೇಲೆ ಅತ್ಯಾಚಾರ ಎಸಗಿರುವ ಪ್ರಕರಣ ಮತ್ತು ಸಾಮಾಜಿಕ ಜಾಲತಾಣದ ಮೂಲಕ ಪರಿಚಯ ಮಾಡಿಕೊಂಡು ಸ್ನೇಹ ನಂತರ ಪ್ರೀತಿಯ ನಾಟಕವಾಡಿ ಮಕ್ಕಳನ್ನು ಲೈಂಗಿಕವಾಗಿ ಬಳಕೆ ಮಾಡಿಕೊಳ್ಳುತ್ತಿರುವ ಪ್ರಕರಣಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಪ್ರೀತಿ-ಪ್ರೇಮ, ಮದುವೆಯಾಗುವುದಾಗಿ ನಂಬಿಸಿ ಬಾಲಕಿ ಮೇಲೆ ಅತ್ಯಾಚಾರ ಎಸಗಿರುವ ಪ್ರಕರಣಗಳು ಹಾಗೂ ಸಾಮಾಜಿಕ ಜಾಲತಾಣದ ಮೂಲಕ ಪರಿಚಯ ಮಾಡಿಕೊಂಡು ಸ್ನೇಹ ನಂತರ ಪ್ರೀತಿ ನಾಟಕವಾಡಿ ಮಕ್ಕಳನ್ನು ಲೈಂಗಿಕವಾಗಿ ಬಳಕೆ ಮಾಡಿಕೊಳ್ಳುತ್ತಿರುವ ಪ್ರಕರಣಗಳ ಬಗ್ಗೆ ನೊಂದವರು ಅಥವಾ ನೊಂದವರ ತಂದೆ-ತಾಯಿ, ಕುಟುಂಬಸ್ಥರು, ದೂರು ನೀಡಿದಲ್ಲಿ ಅಥವಾ ಕೃತ್ಯದ ಬಗ್ಗೆ ಮಾಹಿತಿ ಸ್ವೀಕರಿಸಿದಲ್ಲಿ ಕೂಡಲೇ ಪ್ರಕರಣಗಳನ್ನು ಕಾನೂನು ರೀತ್ಯಾ ಕಡ್ಡಾಯವಾಗಿ ದಾಖಲಿಸಿಕೊಂಡು, ನಿಯಮಾನುಸಾರ ತನಿಖೆ ಕೈಗೊಂಡು, ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸುವ ಮೂಲಕ ಸರ್ಕಾರ ಕಾನೂನು ಕ್ರಮ ಕೈಗೊಳ್ಳುತ್ತಿರುತ್ತದೆ.<br><br>**ಮಕ್ಕಳ ಮೇಲಿನ ಅಪರಾಧಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:-**<br><br>1. ಮಕ್ಕಳ ಮೇಲಿನ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ **"Free and Fair registration of cases"** ಎಂಬುದು ನಮ್ಮ ರಾಜ್ಯದ ಪೊಲೀಸ್ ಇಲಾಖೆಯ ಘೋಷ ವಾಕ್ಯವಾಗಿದೆ.<br>2. ಮಕ್ಕಳ ಅಪರಾಧ ಪ್ರಕರಣಗಳಲ್ಲಿ ವರದಿಯಾದ ಕೂಡಲೇ ವಿಳಂಬ ಮಾಡದೆ ಎಫ್.ಐ.ಆರ್. ಅನ್ನು ದಾಖಲಿಸಿಕೊಂಡು, ತನಿಖೆಯನ್ನು ಕೈಗೊಳ್ಳಲಾಗುತ್ತಿದೆ.<br>3. ಪೋಕ್ಸೋ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ, ಕ್ರಮಬದ್ಧವಾಗಿ ಹಾಗೂ ನಿಯಮಾನುಸಾರ ಕೈಗೊಳ್ಳುವ ಸಂಬಂಧ ಎಸ್.ಓ.ಪಿ. (ನಿರ್ದಿಷ್ಟ ಕಾರ್ಯವಿಧಾನ) ವನ್ನು ಸಿದ್ಧಪಡಿಸಿ ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ. |

| | | |
|---|---|---|
| | | 4. ಪ್ರತಿ ಪೊಲೀಸ್ ಠಾಣೆಯಲ್ಲಿ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.<br>5. ಮಹಿಳಾ ಸಹಾಯವಾಣಿ (1091), ಮಕ್ಕಳ ಸಹಾಯವಾಣಿ 1098 ಮತ್ತು 22943225 ಗಳು ಹಾಗೂ ಕರ್ನಾಟಕದಾದ್ಯಂತ 112(ERS) Emergency Response System ನಿರಂತರವಾಗಿ ಕಾರ್ಯನಿರ್ವಹಿಸುತ್ತಿವೆ.<br>6. ಬೆಂಗಳೂರು ನಗರದಲ್ಲಿ Safe City Project ಯೋಜನೆ ಅಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಸುರಕ್ಷತೆ ಸಂಬಂಧವಾಗಿ 8,876 ಸಿಸಿಟಿವಿ ಕ್ಯಾಮೆರಗಳನ್ನು ಅಳವಡಿಸಲಾಗಿದೆ.<br>7. ಜನ ಸಂದಣಿ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಗಾಗಿ 50 ಸೇಫ್ಟಿ ಐಲ್ಯಾಂಡ್ (Safety Island) ಗಳನ್ನು ಗುರುತಿಸಿ ಮಹಿಳೆಯರಿಗೆ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದೇವೆ<br>8. ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳಲ್ಲಿ 1050 Women Help Desk ಗಳನ್ನು ಸೃಜಿಸಿ 24/7 ಮಹಿಳಾ ಸುರಕ್ಷತಾ ದೃಷ್ಟಿಯಿಂದ ಕರ್ತವ್ಯ ನಿರ್ವಹಿಸಲಾಗುತ್ತಿದೆ.<br>9. ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಪೊಲೀಸ್ ಠಾಣೆಗಳಲ್ಲಿ 35 ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು (Anti-Human Trafficking Units) ಸ್ಥಾಪಿಸಿ ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ಕಾರ್ಯನಿರ್ವಹಿಸಲಾಗುತ್ತಿದೆ.<br>10. ಕೇಂದ್ರ ಸರ್ಕಾರದ ಗೃಹ ಸಚಿವಾಲಯ ಸಹಯೋಗದೊಂದಿಗೆ CCPWC (Cyber Crime Prevention Against Women and Children) ಪೋರ್ಟಲ್ ಅಡಿಯಲ್ಲಿ ಆನ್-ಲೈನ್‌ನಲ್ಲಿ ದಾಖಲಾಗುವ ದೂರುಗಳನ್ನು ಸೆನ್ ಪೊಲೀಸ್ ಠಾಣೆಗಳಲ್ಲಿ ದಾಖಲಿಸಿ ಕ್ರಮ ವಹಿಸಲಾಗುತ್ತದೆ. |

ಕಡತ ಸಂಖ್ಯೆ: ಹೆಚ್ 38 ಎಸ್ ಡಿ ಎನ್ 2025

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು